# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸರ್ಕಾರಿ ನೌಕರರಾದ ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕು ಕೊಡಿಗೇನಹಳ್ಳಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ ಆರ್ ನಾಗರಾಜು (ಪ್ರಸ್ತುತ ಹಂದಿಗುಂಟ ಗ್ರಾಮ ಪಂಚಾಯತ್) ರವರು ಕರ್ತವ್ಯ ಲೋಪ/ದುರ್ವರ್ತನೆ ಎಸಗಿರುವ ಬಗ್ಗೆ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-8064/2015/ಎಆರ್‌ಎಲ್‌ಓ-1, ದಿನಾಂಕ: 16-06-2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಡಿ/8064/2015/ಸನಿಕಾಸ-1, ದಿನಾಂಕ: 16-05-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 16.05.2017 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ. ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕು ಕೋಡಿಗೇನಹಳ್ಳಿ ನಿವಾಸಿಯಾದ ಶ್ರೀ ಬಿ.ಎಸ್.ಹನುಮಂತರಾಯಪ್ಪ ಬಿನ್ ಸಂಜೀವಪ್ಪ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕು ಕೋಡಿಗೇನಹಳ್ಳಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ ಆರ್ ನಾಗರಾಜು (ಪ್ರಸ್ತುತ ಹಂದಿಗುಂಟ ಗ್ರಾಮ ಪಂಚಾಯತ್) (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 9 ರಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ತಮ್ಮ ಸ್ವತ್ತಿಗೆ ಸಂಬಂಧಪಟ್ಟಂತೆ ಸರ್ಕಾರದಿಂದ ಸೌಲಭ್ಯ ಪಡೆದು ದಾಖಲೆಗಳನ್ನು ನೀಡುವಂತೆ ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ಎದುರುದಾರರು ಯವುದೇ ಕ್ರಮ ಕೈಗೊಂಡಿಲ್ಲ, ಅಲ್ಲದೇ ಗ್ರಾಮಕ್ಕೆ ಸಂಬಂಧಪಟ್ಟ ಕಸದ ರಾಶಿಯನ್ನು ಗ್ರಾಮಕ್ಕೆ ಸಮೀಪದಲ್ಲಿರುವ ಕೆರೆಯ ಬಳಿ ಹಾಕಿದ್ದು, ಇದರಿಂದ ಮಾಲಿನ್ಯ ಉಂಟಾಗಿದೆ. ಸದರಿ ಗ್ರಾಮಕ್ಕೆ ಸಂಬಂಧಪಟ್ಟ ಬೀದಿ ದೀಪಗಳನ್ನು ಸರಿಯಾಧ ರೀತಿ ನಿರ್ವಹಣೆ ಮಾಡಿಲ್ಲ. ಸರ್ವೇ ನಂ.124/6ಎ, ಸರ್ವೇ ನಂ.124/6ಬಿ ಜಮೀನಿನಲ್ಲಿ ಸರಿಯಾದ ರೀತಿ ಒಳಚರಂಡಿ ನಿರ್ವಹಿಸಿಲ್ಲ. ಈ ಬಗ್ಗೆ 13ನೇ ಹಣಕಾಸು ಯೋಜನೆಯಲ್ಲಿ ಕ್ರೀಯಾ ಯೋಜನೆ ರೂಪಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

ಸದರಿ ದೂರಿನ ಬಗ್ಗೆ ತನಿಖೆ ಕೈಗೊಂಡು ವರದಿ ಸಲ್ಲಿಸಲು ಮಧುಗಿರಿ ತಾಲ್ಲೂಕ್ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು (ಇನ್ನು ಮುಂದೆ "ತನಿಖಾಧಿಕಾರಿಗಳು" ಎಂದು ಕರೆಯಲ್ಪಡುತ್ತಾರೆ) ರವರನ್ನು ಕೇಳಲಾಗಿ, ಸದರಿಯವರು ತಮ್ಮ ವರದಿಯಲ್ಲಿ-

ದೂರುದಾರರ ಸ್ವತ್ತಿಗೆ ಸಂಬಂಧಪಟ್ಟಂತೆ ಇ-ಸ್ವತ್ತು ತಂತ್ರಾಂಶದಲ್ಲಿ ಖಾತೆ ಬದಲಾವಣೆ ಮಾಡಲಾಗಿದೆ. ಘನ ತ್ಯಾಜ್ಯಾ ವಸ್ತುಗಳನ್ನು ಹಾಕಲು ಗ್ರಾಮ ಪಂಚಾಯತನಲ್ಲಿ ಪ್ರತ್ಯೇಕ ಸ್ಥಳ ಗುರುತಿಸಿದ್ದು, ಗ್ರಾಮದಲ್ಲಿ ಸಂಗ್ರಹವಾಗುವ ಎಲ್ಲಾ ಘನ ತ್ಯಾಜ್ಯಾ ವಸ್ತುಗಳನ್ನು ಗುರುತಿಸುವ ಸ್ಥಳದಲ್ಲಿ ಗುಂಡಿಗಳನ್ನು ತೆಗೆದು ಹಾಕುವಂತೆ ಎದುರದಾರರಿಗೆ ತಿಳಿಸಿದ್ದು, ಕ್ರಮ ಕೈಗೊಂಡಿದ್ದಾರೆ. ಬೀದಿ ದೀಪಗಳನ್ನು ಸಮರ್ಪಕವಾಗಿ ನಿರ್ವಹಿಸುವ ಸಂಬಂಧ ಸ್ವಿಚ್‌ಗಳನ್ನು ಅಳವಡಿಸುವಂತೆ ಬೆಸ್ಕಾಂ ಅಧಿಕಾರಿಗಳನ್ನು ಪತ್ರ ಬರೆಯಲಾಗಿದೆ. ಸರ್ವೇ ನಂ.124/6ಎ ಮತ್ತು ಸರ್ವೇ ನಂ.124/6ಬಿ ಗಳ ನಡುವಿನ ಜಾಗದಲ್ಲಿ ಚರಂಡಿ ನಿರ್ಮಿಸಲು ಕಾಮಗಾರಿ ಪ್ರಾರಂಭಿಸಿದ್ದು, ಸದರಿ ಕಾಮಗಾರಿ ಸ್ಥಳದ ಬಗ್ಗೆ ಅಕ್ಕಪಕ್ಕದವರಲ್ಲಿ ತಕರಾರಿದ್ದ ಪ್ರಯುಕ್ತ ಕಾಮಗಾರಿ ಸ್ಥಗಿತಗೊಂಡಿದೆ. ಈ ಬಗ್ಗೆ ಪೋಲಿಸ್ ಸಹಕಾರದೊಂದಿಗೆ ಬಗೆಹರಿಸಿ, 2 ತಿಂಗಳಲ್ಲಿ ಉದ್ಯೋಗ ಖಾತರಿ ಯೋಜನೆ ಅಡಿ ಚರಂಡಿ ನಿರ್ಮಿಸಿ ವರದಿ ಸಲ್ಲಿಸುವಂತೆ ಎದುರುದಾರರಿಗೆ ತಿಳಿಸಲಾಗಿದೆಯೆಂದು ಹೇಳಿದ್ದಾರೆ.

ವರದಿಗೆ ದೂರುದಾರರಿಂದ ಪ್ರತ್ಯುತ್ತರ ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ವರದಿಯನ್ನು ಅಲ್ಲಗಳೆದು, ದೂರಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

**ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ-**

ಎದುರುದಾರರು ಗ್ರಾಮ ಪಂಚಾಯತ್ ವ್ಯಾಪ್ತಿಗೆ ಸಂಬಂಧಪಟ್ಟ ಘನ ತ್ಯಾಜ್ಯ ವಸ್ತುಗಳನ್ನು ಸಂಗ್ರಹಿಸುವ ದೃಷ್ಟಿಯಿಂದ ಕ್ರಮ ಕೈಗೊಂಡಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಅದೇ ರೀತಿ ಬೀದಿ ದೀಪಗಳನ್ನು ಸಮರ್ಪಕವಾಗಿ ನಿರ್ವಹಿಸಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಗ್ರಾಮಕ್ಕೆ ಸಂಬಂಧಪಟ್ಟಂತೆ ಸರ್ವೆ ನಂ.124/6ಎ ಮತ್ತು ಸರ್ವೇ ನಂ.124/6ಬಿ ಗಳ ನಡುವಿನ ಜಾಗದಲ್ಲಿ ಚರಂಡಿ ನಿರ್ಮಿಸಲು ಗ್ರಾಮ ಪಂಚಾಯತ್ ವತಿಯಿಂದ ಯಾವ ಕ್ರಮ ಕೈಗೊಳ್ಳಲಾಗಿದೆ? ಮತ್ತು ಸದರಿ ಕಾಮಗಾರಿಗೆ ಆ ಸ್ಥಳದ ಅಕ್ಕಪಕ್ಕದವರು ತಂಟೆ-ತಕರಾರು ಮಾಡಿದ ಸಂಬಂಧ ಪೋಲಿಸ್ ಸಹಕಾರದೊಂದಿಗೆ ಸದರಿ ಕಾಮಗಾರಿಯನ್ನು ಉದ್ಯೋಗ ಖಾತರಿ ಯೋಜನೆ ಅಡಿ 2 ತಿಂಗಳೊಳಗಾಗಿ ನಿರ್ವಹಣೆ ಮಾಡುವ ಬಗ್ಗೆ ಎದುರುದಾರರಿಗೆ ನಿರ್ದೇಶನವಿದೆ. ಈ ಬಗ್ಗೆ 2014-15ನೇ ಸಾಲಿನ 14ನೇ ಹಣಕಾಸು ಯೋಜನೆಯಲ್ಲಿ ಕ್ರಿಯಾ ಯೋಜನೆ ರೂಪಿಸಿ, ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ. ಆದರೆ, ಸದರಿ ಕಾಮಗಾರಿ ನಿರ್ವಹಣೆ ಮಾಡಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸರ್ವೇ ನಂ.124/6ಎ ಮತ್ತು ಸರ್ವೇ ನಂ.124/6ಬಿ ನಡುವಿನ ಜಾಗದ ಕಮಗಾರಿಗೆ 2014-15ನೇ ಸಾಲಿನಲ್ಲಿ 14ನೇ ಹಣಕಾಸು ಯೋಜನೆಯಲ್ಲಿ ಕ್ರಿಯಾ ಯೋಜನೆ ರೂಪಿಸಿ ಅನುದಾನ ಬಿಡುಗಡೆಯಾಗಿರುವುದು ದಾಖಲೆಗಳಿಂದ ಕಂಡು ಬಂದಿದೆ. ಆದರೆ, ಎದುರುದಾರರು ಸದರಿ ಕಾಮಗಾರಿಯನ್ನು ನಿರ್ವಹಿಸಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಕಾರಣ, ಎದುರುದಾರರು ಸದರಿ ಕಾಮಗಾರಿಯನ್ನು ನಿರ್ವಹಣೆ ಮಾಡದೇ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಆದುದರಿಂದ, ಎದುರುದಾರರು ಸರ್ಕಾರಿ ನೌಕರರಾಗಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ಅಡಿಯಲ್ಲಿ ದುರ್ನಡತೆ/ದುರ್ವತನೆ ಕಂಡು ಬಂದಿರುವುದರಿಂದ, ಸದರಿ ಎದುರುದಾರರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಎಂದು ತಿಳಿಸಿರುತ್ತಾರೆ. ಹಾಗೂ ಎದುರುದಾರರ ವಿರುದ್ಧದ ಇಲಾಖಾ ವಿಚಾರಣೆ ಮಾಡಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14-ಎ ರಡಿಯಲ್ಲಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/542/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 12-07-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಆರ್ ನಾಗರಾಜು, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕೊಡಿಗೇನಹಳ್ಳಿ ಗ್ರಾಮ ಪಂಚಾಯತ್ (ಪ್ರಸ್ತುತ ಹಂದಿಗುಂಟ ಗ್ರಾಮ ಪಂಚಾಯತ್), ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು–2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 226 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಧುಗಿರಿ ತಾಲ್ಲೂಕು ಮತ್ತು ಜಿಲ್ಲೆ.
6. ಶ್ರೀ ಆರ್ ನಾಗರಾಜು, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕೊಡಿಗೇನಹಳ್ಳಿ ಗ್ರಾಮ ಪಂಚಾಯತ್ (ಪ್ರಸ್ತುತ ಹಂದಿಗುಂಟ ಗ್ರಾಮ ಪಂಚಾಯತ್) ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.